**ಪಿ.ಡಬ್ಲ್ಯೂ-1**

**ದಿನಾಂಕ 13-08-2025 ರಂದು ಸಾಕ್ಷಿಯವರಿಗೆ ಪ್ರಮಾಣ ವಚನ ಬೋಧಿಸಲಾಯಿತು.**
**ಮುಖ್ಯ ವಿಚಾರಣೆ :ಶ್ರೀ.ಎಸ್.ಎಮ್.ಪಿ ವಕೀಲರಿಂದ ವಾದಿ ಪರವಾಗಿ**

ನನ್ನ ಮುಖ್ಯವಿಚಾರಣೆಯ ಪ್ರಮಾಣಪತ್ರ ಸಲ್ಲಿಸಿದ್ದು, ಅದನ್ನು ತಯಾರಿಸಲು ಗೌರವಾನ್ವಿತ ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಅದರಲ್ಲಿ ಬರೆದಿರುವ ವಿಷಯಗಳು ಸರಿಯಾಗಿರುತ್ತವೆ ಮತ್ತು ಸತ್ಯವಾಗಿರುತ್ತವೆ ಎಂದು ಈ ಮೂಲಕ ಪ್ರಮಾಣಿಸಿಕರಿಸುತ್ತೇನೆ.

ನಾನು ಈಗ ಸರ್ವೆ ನಂ.93/2 ರ 2024-25 ರ ಪಹಣಿ ಪತ್ರಿಕೆ ಹಾಜರಪಡಿಸಿದ್ದು ಅದನ್ನು ನಿಪಿ-1 ಎಂದು, ಪ್ರತಿವಾದಿಯು ನನಗೆ ದಿಃ15.03.2023 ರಂದು ಬರೆದುಕೊಟ್ಟ ನೋಂದಾಯಿತ್ ಕ್ರಯದ ಕರಾರು ಪತ್ರದ ಮೂಲ ಪ್ರತಿ ಹಾಜರಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ಸದರಿ ದಾಖಲಾತಿಯ ಪ್ರತಿ ಪುಟದ ಮೇಲೆ ಇರುವ ತನ್ನ ಸಹಿಯನ್ನು ಸಾಕ್ಷಿ ಗುರುತಿಸುತ್ತಾರೆ. 3 ನೇ ಪುಟದ ಮೇಲಿನ ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಸದರಿ ದಾಖಲಾತಿಯ ಮೇಲೆ ಇರುವ ಪ್ರತಿವಾದಿಯ ಸಹಿಯನ್ನು ಸಾಕ್ಷಿ ನೋಡಿ ಗುರುತಿಸುತ್ತಾರೆ. ಸಾಕ್ಷಿದಾರರಾಗಿ ಯಲ್ಲಪ್ಪ ಸುಣಗಾರ, ಸಿದ್ದಪ್ಪ ಕುಂಬಾರ, ಸಂಗಪ್ಪ ತೊರಗಲರವರು ಸಹಿ ಮಾಡಿರುತ್ತಾರೆ.

ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು ಸಮಯ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು. )

ಓ. ಹೇ. ಕೇ. ಸರಿ ಅದೆ.

ಸಹಿ/--

ಸಾಕ್ಷಿಯ ಸಹಿ

ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು
ಜೆ.ಎಂ.ಎಫ್.ಸಿ., ಮುಧೋಳ